ಕರ್ನಾಟಕ ಸರ್ಕಾರ

ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560012.

ಸಂಖ್ಯೆ: ಪಪೂಶಿಇ/ಪರೀಕ್ಷೆ/ಬಿ.ಉ.ಪ್ರ/ಮಾರ್ಚ್–19/2019–20 ದಿನಾಂಕ: 24.12.2019

## ಸುತ್ತೋಲೆ

ವಿಷಯ: ಜನವರಿ / ಫೆಬ್ರವರಿ 2020ರ ದ್ವಿತೀಯ ಪಿಯುಸಿ ಪೂರ್ವ ಸಿದ್ಧತಾ ಪರೀಕ್ಷೆಗಳಿಗೆ ಅರ್ಥಶಾಸ್ತ್ರ, ವ್ಯವಹಾರ ಅಧ್ಯಯನ, ಲೆಕ್ಕಶಾಸ್ತ್ರ, ಹಾಗೂ ಭೌತಶಾಸ್ತ್ರ ವಿಷಯಗಳ ಪ್ರತ್ಯೇಕ ಪ್ರಶ್ನೆಪತ್ರಿಕೆ ತಯಾರಿಸಿಕೊಳ್ಳುವ ಬಗ್ಗೆ.

ಉಲ್ಲೇಖ: ಇಲಾಖಾ ಜ್ಞಾಪನ ಸಂಖ್ಯೆ: ಪಪೂಶಿಇ/ಪರೀಕ್ಷೆ/ಬಿ.ಉ.ಪ್ರ/ಮಾರ್ಚ್–19/2019–20 ದಿನಾಂಕ 29.08.2019.

* * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖಿತ ಜ್ಞಾಪನದಲ್ಲಿ 2020ರ ಮಾರ್ಚ್ ದ್ವಿತೀಯ ಪಿಯುಸಿ ಪೂರ್ವ ಸಿದ್ಧತಾ ಪರೀಕ್ಷೆಗೆ ಖಜಾನೆಯಲ್ಲಿ ಶೇಖರಿಸಿರುವ ಮಾರ್ಚ್ 2019ರ ದ್ವಿತೀಯ ಪಿಯುಸಿ ಪ್ರಶ್ನೆಪತ್ರಿಕೆಗಳನ್ನು ಬಳಸಿಕೊಳ್ಳಲು ನಿರ್ದೇಶಿಸಿಲಾಗಿದೆ. ಆದಾಗ್ಯೂ ಪ್ರಸ್ತುತ ಶೈಕ್ಷಣಿಕ ವರ್ಷದಲ್ಲಿ ಅರ್ಥಶಾಸ್ತ್ರ, ವ್ಯವಹಾರ ಅಧ್ಯಯನ, ಲೆಕ್ಕಶಾಸ್ತ್ರ, ಹಾಗೂ ಭೌತಶಾಸ್ತ್ರದ ವಿಷಯಗಳ ಪಠ್ಯವಸ್ತುವನ್ನು ಶೇಕಡಾ 5 ರಿಂದ 10 ರಷ್ಟು ಕಡಿತ ಗೊಳಿಸಲಾಗಿರುವ ಕಾರಣ ಸದರಿ ವಿಷಯಗಳಿಗೆ ಸಂಬಂಧಿಸಿದಂತೆ ಮಾತ್ರ ಪ್ರಶ್ನೆಪತ್ರಿಕೆಗಳನ್ನು ಪ್ರತ್ಯೇಕವಾಗಿ ತಯಾರಿಸಿ ವಿತರಿಸಲು ಈ ಮೂಲಕ ಸೂಚಿಸಿದೆ. ಉಳಿದ ವಿಷಯಗಳಿಗೆ ಉಲ್ಲೇಖಿದ ಜ್ಞಾಪನದನ್ವಯ ಕ್ರಮವಹಿಸುವುದು.

M. Kiy...

ನಿರ್ದೇಶಕರು

ಪದವಿ ಪೂರ್ವ ಶಿಕ್ಷಣ ಇಲಾಖೆ.

ಪ್ರತಿಯನ್ನು :

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರುಗಳಿಗೆ ಸೂಕ್ತ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಸೂಕ್ತ ಕ್ರಮಕ್ಕಾಗಿ.
3. ಕಛೇರಿ ಪ್ರತಿ.